# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 609(720) |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 18.08.2025 |

**ಪ್ರಶ್ನೆ** / **ಉತ್ತರ**

**(ಅ) ಪ್ರಶ್ನೆ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಮತ್ತು ಮೈಸೂರು ವಿಶ್ವವಿದ್ಯಾನಿಲಯ, ಮಾನಸ ಗಂಗೋತ್ರಿ ಈ ಎರಡು ವಿಶ್ವವಿದ್ಯಾನಿಲಯಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು: (ವಿವರಗಳನ್ನು ಒದಗಿಸುವುದು)

**ಉತ್ತರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಮತ್ತು ಮೈಸೂರು ವಿಶ್ವವಿದ್ಯಾನಿಲಯ, ಮಾನಸ ಗಂಗೋತ್ರಿ ಈ ಎರಡು ವಿಶ್ವವಿದ್ಯಾನಿಲಯಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಮಂಜೂರಾದ ಹುದ್ದೆಗಳು | |
|---|---|---|---|
| | | **ಬೋಧಕ** | **ಬೋಧಕೇತರ** |
| 01 | ಮೈಸೂರು ವಿ.ವಿ | 571 | 799 |
| 02 | ಕರ್ನಾಟಕ ರಾಜ್ಯ ಮುಕ್ತ ವಿವಿ | 133 | 575 |

**(ಆ) ಪ್ರಶ್ನೆ:** ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರರ ಸಂಖ್ಯೆ ಎಷ್ಟು :

**ಉತ್ತರ:** ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರರ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಭರ್ತಿಯಾದ ಹುದ್ದೆಗಳು | |
|---|---|---|---|
| | | **ಬೋಧಕ** | **ಬೋಧಕೇತರ** |
| 01 | ಮೈಸೂರು ವಿ.ವಿ. | 176 | 403 |
| 02 | ಕರ್ನಾಟಕ ರಾಜ್ಯ ಮುಕ್ತ ವಿವಿ | 68 | 265 |

**(ಇ) ಪ್ರಶ್ನೆ:** ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಂಖ್ಯೆ ಎಷ್ಟು: ಹಾಗೂ ಎಷ್ಟು ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳುವುದಕ್ಕೆ ಅವಕಾಶವಿದೆ:

**ಉತ್ತರ:** ಮೈಸೂರು ವಿಶ್ವವಿದ್ಯಾಲಯ ಮತ್ತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ವಿವರ ಈ ಕೆಳಕಂಡಂತಿದೆ.

| ವಿಶ್ವವಿದ್ಯಾಲಯ | ಬೋಧಕ ಹುದ್ದೆಗಳು | ಬೋಧಕೇತರ ಹುದ್ದೆಗಳು |
|---|---|---|
| ಮೈಸೂರು ವಿವಿ | 258 | 153 |
| ಕರ್ನಾಟಕ ರಾಜ್ಯ ಮುಕ್ತ ವಿವಿ | 48 | 100 |

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 56ರಡಿ ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು ಅದರಂತೆ ಮೈಸೂರು ವಿಶ್ವವಿದ್ಯಾಲಯವು ತಾತ್ಕಾಲಿಕವಾಗಿ ಬೋಧಕ/ಬೋಧಕೇತರ ಹುದ್ದೆಗಳನ್ನು ನೇಮಕಾತಿ ಮಾಡಿಕೊಂಡಿರುತ್ತದೆ.

| | | |
|---|---|---|
| | | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಸಾಮಾನ್ಯ ನೇಮಕಾತಿ ಪರಿನಿಯಮ XXI ರ ನಿಯಮ 4(2)ರನ್ವಯ ಬೋಧಕ / ಬೋಧಕೇತರ ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಮೇಲ್ಕಂಡ ಅಧಿನಿಯಮ ಹಾಗೂ ಪರಿನಿಯಮದನ್ವಯ ಮೈಸೂರು ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯಗಳು ಅವುಗಳಿಗೆ ಮಂಜೂರಾದ ಹುದ್ದೆಗಳ ಎದುರಾಗಿ ಬೋಧಕ-ಬೋಧಕೇತರ ಹುದ್ದೆಗಳನ್ನು ಗುತ್ತಿಗೆ / ತಾತ್ಕಾಲಿಕ / ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿರುತ್ತವೆ. |
| (ಈ) | ಖಾಲಿ ಇರುವ ಮಂಜೂರಾದ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ? | ಈ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ-ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ**: ಇಡಿ 44 ಯುಓವಿ 2025

(ಡಾ ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು.